ಆಯುಕ್ತರು
ಮಹಾನಗರಪಾಲಿಕೆ, ಶಿವಮೊಗ್ಗ
ದೂರವಾಣಿ/ಫ್ಯಾಕ್ಸ್: 08182-226565
Email:ka.shivamogga.cc@gmail.com

Commissioner
Shivamogga City Corporation
Tel/Fax: 08182-226565
Email:ka.shivamogga.cc@gmail.com

No. 170136 - MISLANIOUS/AC-1/CR-002/22-23 (5296/22-23) ದಿನಾಂಕ: **22.01.2024**

## ಅಧಿಸೂಚನೆ

ಶಿವಮೊಗ್ಗ ಮಹಾನಗರಪಾಲಿಕೆಗೆ ಮಂಜೂರಾದ ಸಂಖ್ಯಾತಿರಿಕ್ತ ಪೌರಕಾರ್ಮಿಕರ ಹುದ್ದೆಗಳನ್ನು ಹೊಸದಾಗಿ ಸೃಜಿಸಿ ಹೊರಡಿಸಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 171 ಎಂಎನ್‌ಇ 2022(ಇ), ದಿನಾಂಕ: 09.03.2023 ರಂತೆ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 171 ಎಂಎನ್‌ಇ 2022(ಇ), ದಿನಾಂಕ: 27.10.2023 ರಂದು ಹೊರಡಿಸಿರುವ ಸೇರ್ಪಡೆ ಆದೇಶದನ್ವಯ ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ಸಂಖ್ಯೆ: ನಅಇ 171 ಎಂಎನ್‌ಇ 2022(ಇ), ದಿನಾಂಕ: 02.11.2023 ರನ್ವಯ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ (ರಾಜ್ಯದ ಪಾಲಿಕೆಗಳ ಪೌರಕಾರ್ಮಿಕರ ನೇಮಕಾತಿ)(ವಿಶೇಷ) ನಿಯಮಗಳು 2022 ರ ರೀತ್ಯಾ ಮಂಜೂರಾದ ಸಂಖ್ಯಾತಿರಿಕ್ತ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಶಿವಮೊಗ್ಗ ಮಹಾನಗರಪಾಲಿಕೆಗೆ ಮಂಜೂರಾದ ಸಂಖ್ಯಾತಿರಿಕ್ತ ಹುದ್ದೆಗಳು ಹಾಗೂ ವರ್ಗೀಕರಣ ಈ ಕೆಳಕಂಡಂತಿರುತ್ತದೆ.

**ಶಿವಮೊಗ್ಗ ಮಹಾನಗರಪಾಲಿಕೆಗೆ ಮಂಜೂರಾದ ಸಂಖ್ಯಾತಿರಿಕ್ತ ಹುದ್ದೆಗಳು**
**(ರೋಸ್ಟರ್ ಬಿಂದು ಕ್ರ.ಸಂ.01 ರಿಂದ 89 ರವರೆಗೆ)**

| ಕ್ರ.ಸಂ | ಮೀಸಲಾತಿ ವರ್ಗ | ಇತರೆ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನಾ ನಿರಾಶ್ರಿತರು | ಕನ್ನಡ ಮಾಧ್ಯಮ | ಅಂಗವಿಕಲ ಅಭ್ಯರ್ಥಿ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|---|---|
| | | 1 | 2 | 3 | 4 | 5 | 6 | 7 | 8 | 9 |
| 1 | ಪರಿಶಿಷ್ಟ ಜಾತಿ | 2 | 6 | 4 | 1 | 0 | 1 | 1 | 0 | 15 |
| 2 | ಪರಿಶಿಷ್ಟ ಪಂಗಡ | 2 | 2 | 2 | 0 | 0 | 0 | 1 | 0 | 7 |
| 3 | ಪ್ರವರ್ಗ -1 | 1 | 1 | 1 | 0 | 0 | 0 | 1 | 0 | 4 |
| 4 | ಪ್ರವರ್ಗ -2ಎ | 2 | 5 | 4 | 1 | 0 | 0 | 1 | 0 | 13 |
| 5 | ಪ್ರವರ್ಗ-2ಬಿ | 1 | 1 | 1 | 0 | 0 | 0 | 1 | 0 | 4 |
| 6 | ಪ್ರವರ್ಗ -3ಎ | 1 | 1 | 1 | 0 | 0 | 0 | 0 | 0 | 3 |
| 7 | ಪ್ರವರ್ಗ -3ಬಿ | 1 | 1 | 1 | 0 | 0 | 0 | 1 | 0 | 4 |
| 8 | ಸಾಮಾನ್ಯ | 6 | 13 | 10 | 3 | 2 | 2 | 2 | 1 | 39 |
| ಒಟ್ಟು | | 16 | 30 | 24 | 5 | 2 | 3 | 8 | 1 | 89 |
| ವೇತನ ಶ್ರೇಣಿ ರೂ. 17000-400-18600-450-20400-500-22400-550-24600-600-27000-650-28950 | | | | | | | | | | |

ವಯೋಮಿತಿಃ

01. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ರ ನಿಯಮಗಳು ಅಥವಾ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ಅಧಿಕಾರಿ & ನೌಕರರ ನೇಮಕಾತಿ) ನಿಯಮಗಳು 2011ರ ನಿಯಮಗಳಲ್ಲಿ ಏನೇ ಹೇಳಿದ್ದರೂ, ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ಸಂಖ್ಯೆ:ನಅಇ 171 ಎಂಎನ್‌ಇ 2022(ಇ), ದಿನಾಂಕ:02.11.2023 ರಲ್ಲಿ ಹೊರಡಿಸಿದ ಅಧಿಸೂಚನೆ ಜಾರಿಗೆ ಬಂದ ದಿನಾಂಕದಿಂದ ಗರಿಷ್ಠ ವಯೋಮಿತಿ 55 ವರ್ಷಗಳನ್ನು ಮೀರತಕ್ಕದ್ದಲ್ಲ.
02. ಶೈಕ್ಷಣಿಕ/ವಿದ್ಯಾರ್ಹತೆ ದಾಖಲೆಗಳು/ಆಧಾರ್ ಕಾರ್ಡ್/ಮತದಾರರ ಗುರುತಿನ ಚೀಟಿ/ಪಡಿತರ ಚೀಟಿ ಅಥವಾ ಪ್ರಾವಿಡೆಂಟ್ ಫಂಡ್ ಅಥವಾ ಇ.ಎಸ್.ಐ. ದಾಖಲಾತಿಗಳನ್ನು ಆಧರಿಸಿ ಅಭ್ಯರ್ಥಿಯ ವಯಸ್ಸನ್ನು ನಿರ್ಧರಿಸಲಾಗುವುದು.
03. ಮೇಲ್ಕಂಡ ಕ್ರ.ಸಂ.01 & 02 ರಲ್ಲಿ ಏನೇ ಹೇಳಿದ್ದರೂ, ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ರಾಜ್ಯದ ಪಾಲಿಕೆಗಳ ಪೌರಕಾರ್ಮಿಕರ ನೇಮಕಾತಿ) (ವಿಶೇಷ) ನಿಯಮಗಳು 2022 ರಲ್ಲಿ ವಯೋಮಿತಿಗೆ ಸಂಬಂಧಿಸಿದಂತೆ ಸರ್ಕಾರವು ಹೊರಡಿಸುವ ಆದೇಶಕ್ಕೆ ಈ ಅಧಿಸೂಚನೆಯು ಒಳಪಟ್ಟಿರುತ್ತದೆ.

<u>ಕನಿಷ್ಠ ವಿದ್ಯಾರ್ಹತೆ</u>

01. ಕನ್ನಡ ಭಾಷೆ ಮಾತನಾಡಲು ಗೊತ್ತಿರಬೇಕು.

<u>ನೇಮಕಾತಿ ಅರ್ಹತೆ / ವಿಧಾನ:</u>

01. ಅಭ್ಯರ್ಥಿಗಳು ಹಾಲಿ ನೇರಪಾವತಿ, ಕ್ಷೇಮಾಭಿವೃದ್ಧಿ ಅಥವಾ ದಿನಗೂಲಿ ಆಧಾರದ ಮೇಲೆ ಕನಿಷ್ಠ ಎರಡು ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಸೇವೆಯನ್ನು ಸಲ್ಲಿಸುತ್ತಿರುವ, ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಆದ್ಯತೆಯನ್ನು ನೀಡಲಾಗುವುದು.
02. ನೇಮಕಾತಿಯಲ್ಲಿ ಹಾಲಿ ನೇರಪಾವತಿ, ಕ್ಷೇಮಾಭಿವೃದ್ಧಿ ಅಥವಾ ದಿನಗೂಲಿ ಅಥವಾ ಸಮಾನ ಕೆಲಸಕ್ಕೆ ಸಮಾನ ವೇತನ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಅನುಕ್ರಮವಾಗಿ ಪರಿಗಣಿಸಲಾಗುವುದು.
03. ಹಾಲಿ ನೇರಪಾವತಿ, ಕ್ಷೇಮಾಭಿವೃದ್ಧಿ, ದಿನಗೂಲಿ, ಸಮಾನ ಕೆಲಸಕ್ಕೆ ಸಮಾನ ವೇತನ, ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರು 2 ವರ್ಷಗಳಿಗೆ ಮೇಲ್ಪಟ್ಟು ಶಿವಮೊಗ್ಗ ಮಹಾನಗರಪಾಲಿಕೆಯಿಂದ ವೇತನ ಪಡೆದ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.
04. ನೇರಪಾವತಿ ನೌಕರರಿಗೆ ಸಂಬಂಧಿಸಿದಂತೆ ಮಹಾನಗರಪಾಲಿಕೆಯಿಂದ ಪಾವತಿಸಲಾದ ವೇತನ, ಕಾರ್ಮಿಕರ ರಾಜ್ಯ ವಿಮೆ(ಇ.ಎಸ್.ಐ) & ಭವಿಷ್ಯ ನಿಧಿ (ಪಿ.ಎಫ್) & ವೇತನ ಪಡೆದ ಎರಡು ವರ್ಷಗಳ ದಾಖಲಾತಿಗಳನ್ನು ನೇಮಕಾತಿಯಲ್ಲಿ ಆದ್ಯತೆಯ ಮೇಲೆ ಪರಿಗಣಿಸಲಾಗುವುದು.
05. ಎರಡು ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಪರಿಗಣಿಸಲಾಗುವುದು.
06. ಸಂಖ್ಯಾತಿರಿಕ್ತ ಹುದ್ದೆಗಳನ್ನು ಭರ್ತಿ ಮಾಡಬೇಕಾದರೆ ಸಮತಲ ಮೀಸಲಾತಿಯಡಿ ಕನ್ನಡ ಮಾಧ್ಯಮ, ಗ್ರಾಮೀಣ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆಂದು ಮೀಸಲಾದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದ ಪಕ್ಷದಲ್ಲಿ ಈ ಮೀಸಲಾದ ಹುದ್ದೆಗಳಿಗೆ ಉಳಿದ ಅರ್ಹರಿರುವ ಪೌರಕಾರ್ಮಿಕರುಗಳನ್ನು ಪರಿಗಣಿಸಲಾಗುವುದು.

07. ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ದಾಖಲೆಗಳನ್ನು ಅರ್ಜಿ ಸಲ್ಲಿಕೆಗೆ ನಿಗಧಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು, ಹಾಗೂ ಮೂಲ ದಾಖಲೆಗಳನ್ನು ದಾಖಲಾತಿ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

08. ಈ ನೇಮಕಾತಿಯು ಸರ್ಕಾರ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶ ಮತ್ತು ಸುತ್ತೋಲೆಗಳ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿದೆ.

09. ಅಭ್ಯರ್ಥಿಯ ಹೆಸರನ್ನು ಪ್ರಕಟಿಸಿದ ಮಾತ್ರಕ್ಕೆ ಅವರ ನೇಮಕಾತಿಯ ಹಕ್ಕು ಎಂದು ಪರಿಭಾವಿಸತಕ್ಕದ್ದಲ್ಲ.

ಅರ್ಜಿ ಸಲ್ಲಿಸುವ ವಿಧಾನ ಹಾಗೂ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ

01. ದಿನಾಂಕ:24.01.2024 ರಿಂದ ಅರ್ಜಿಗಳನ್ನು ಆಯುಕ್ತರು, ಮಹಾನಗರಪಾಲಿಕೆ, ಶಿವಮೊಗ್ಗರವರ ಕಛೇರಿಯಲ್ಲಿ ಪಡೆಯಬಹುದಾಗಿರುತ್ತದೆ.

02. ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:22.02.2024 ರೊಳಗೆ ಆಯುಕ್ತರು, ಮಹಾನಗರಪಾಲಿಕೆ, ಶಿವಮೊಗ್ಗರವರ ಕಛೇರಿಯಲ್ಲಿ ಸಂಜೆ 5.30 ರೊಳಗೆ ಸಲ್ಲಿಸತಕ್ಕದ್ದು.

03. ಅರ್ಜಿ ಶುಲ್ಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಅಂಗವಿಕಲ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ರೂ.100.00 ಮತ್ತು ಸಾಮಾನ್ಯ ವರ್ಗ 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ರೂ.200.00 ಗಳ ನಗದು ಚಲನ್ ಮುಖಾಂತರ ಅದನ್ನು ಸಲ್ಲಿಸಿ ಅರ್ಜಿಯನ್ನು ಪಡೆಯತಕ್ಕದ್ದು.

ಮೀಸಲಾತಿ ಕೋರ ಬಯಸುವ ಪ್ರಮಾಣ ಪತ್ರಗಳು

ಎ. ಜಾತಿ ಮೀಸಲಾತಿ ಕೋರ ಬಯಸುವ ಪ್ರಮಾಣ ಪತ್ರಗಳು

01. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ-ಡಿ ರಲ್ಲಿ

02. ಪ್ರವರ್ಗ 1 ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ

03. 2-ಎ, 2-ಬಿ, 3-ಎ, 3-ಬಿ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿತ ತಹಶೀಲ್ದಾರ್ ರವರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು ಹಾಗೂ ಈ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಬೇಕು. ಈ ಹುದ್ದೆಗಳಿಗಾಗಿ ಆಯ್ಕೆ ಹೊಂದುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಜಾತಿ ಪ್ರಮಾಣ ಪತ್ರಗಳನ್ನು ನೇಮಕಾತಿ ಪ್ರಾಧಿಕಾರವು ಅವುಗಳ ಸಿಂಧುತ್ವದ ಬಗ್ಗೆ ಪರಿಶೀಲನೆ ಒಳಪಡಿಸಲಾಗುತ್ತದೆ.

ಬಿ. ಗ್ರಾಮೀಣ ಅಭ್ಯರ್ಥಿ

1. ಸರ್ಕಾರ ಅಧಿಸೂಚನೆ ಸಂಖ್ಯೆ:ಸಂವ್ಯಶಾವಿ.59.ಶಾಸನ 2000 ದಿನಾಂಕ: 06.01.2001 ರ ಅನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತೆ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1ನೇ ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿದ್ದಲ್ಲಿ ಮಾತ್ರ ಈ ಮೀಸಲಾತಿ ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ. 08.ಸೆನೇನಿ.2001, ದಿನಾಂಕ:13.2.2001 ರನ್ವಯ ನಮೂನೆ-2 ಅನ್ನು ಸಂಬಂಧ ಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿರವರ ಮೇಲು ರುಜುವಿನೊಂದಿಗೆ ಹಾಗೂ

ಈ ಪ್ರಮಾಣ ಪತ್ರವಲ್ಲದೆ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ನಿಗಧಿ ಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೆ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ/ಪರಿಶಿಷ್ಠ ಪಂಗಡ , ಪ್ರವರ್ಗ-1, ಪ್ರವರ್ಗ-2ಎ, 2-ಬಿ, 3-ಎ, 3-ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧ ಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿರವರ ಮೇಲುರುಜುವಿನೊಂದಿಗೆ ಹಾಗೂ ಜಾರಿ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲದಾಖಲಾತಿ ಪರಿಶೀಲನೆಗೆ ಅರ್ಹರಾದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣಪತ್ರದ ಮೂಲಪ್ರತಿಯನ್ನು ಪರಿಶೀಲನೆಗೆ ತಪ್ಪದೆ ಹಾಜರುಪಡಿಸತಕ್ಕದ್ದು ಹಾಗೂ ಈ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಬೇಕು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

ಸಿ. ಅಂಗವಿಕಲ ಅಭ್ಯರ್ಥಿ

ಅಂಗವಿಕಲ ಅಭ್ಯರ್ಥಿ ಎಂದರೆ:

- ಕಣ್ಣಿನ ದೃಷ್ಟಿಯನ್ನು ಸರಿಪಡಿಸಲು ಕನ್ನಡಕವನ್ನು ಹಾಕಿದಾಗ ಎರಡೂ ಕಣ್ಣಿನ ಪೈಕಿ ಉತ್ತಮವಾದ ಕಣ್ಣಿನಲ್ಲಿ 6:6.0 ಅಥವಾ 20:2000(ಸ್ನೈಲನ್) ಅನ್ನು ಮೀರದಿರುವ ದೃಷ್ಟಿ ಸಾಮರ್ಥ್ಯ ವಿರುವ ವ್ಯಕ್ತಿ.
- 20 ಡಿಗ್ರಿಗಳು ಅಥವಾ ಅದಕ್ಕು ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಟಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ.
- ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿರುವವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
- ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯ ನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವವರು ಅರ್ಹರಾಗುವುದಿಲ್ಲ.
- ವಿವಿಧ ಹಂತಗಳಲ್ಲಿ ಅಂಕವಿಕಲರ ವೈದ್ಯಕೀಯ ಪ್ರಮಾಣ ಪತ್ರ ( ಅಂಗವಿಕಲರ ಗುರುತಿನ ಚೀಟಿ) ವಿತರಿಸುವ ಸಂಬಂಧ ವೈದ್ಯಕೀಯ ಮಂಡಳಿಯನ್ನು ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್ ಪಿ 2010, ಬೆಂಗಳೂರು, ದಿನಾಂಕ: 08.02.2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರ, ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ ಮತ್ತು ರಾಜ್ಯದ ಸರ್ಕಾರಿ ಜಿಲ್ಲಾ ಆಸ್ಪತ್ರೆಗಳ ತಜ್ಞ ವೈದ್ಯರು ವಿಕಲ ಚೇತನರಿಗೆ ವೈದ್ಯಕೀಯ ಪ್ರಮಾಣ ಪತ್ರ ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.
- ದೈಹಿಕ ಅಂಗವಿಕಲತೆಗೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞರಿಂದ ದೈಹಿಕ ಅಂಗವಿಕಲತೆಯ ಮೌಲೀಕರಣವನ್ನು ಅಲ್ಬಿಕೋ ಕಾನ್ಪುರ್ (WHO Standard) ಇದರ ಆದಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೇನಿನಿ 2005, ದಿನಾಂಕ:19.11.2005 ರಲ್ಲಿ ನಿಗಧಿಪಡಿಸಿದ ಶೇ 40ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಹಾಗೂ ಈ ಪ್ರಮಾಣ ಪತ್ರದ ದೃಢೀಕೃತ ಪ್ರತಿ, UDID ಪ್ರತಿಯನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಬೇಕು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ

ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೆ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

ಡಿ. ಮಾಜಿ ಸೈನಿಕ

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್ ಆರ್ ಆರ್ 92 ದಿನಾಂಕ : 01-04-1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್ ಆರ್ ಆರ್ 95 ದಿನಾಂಕ : 21-10-1995 ರನ್ವಯ ನೇರ ನೇಮಕಾತಿಗಳಲ್ಲಿ ಶೇ.10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು(ಸಾಮಾನ್ಯ ನೇಮಕಾತಿ) ನಿಯಮಗಳು. 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ.

1. ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ, ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು
2. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳ ಮತ್ತು ಮಲ ಮಕ್ಕಳ) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.
   a. ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

      ಅಥವಾ

   b. ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಅಂತಹ ಸೇವೆಯಿಂದ ಬಿಡುಗಡೆಯಾದವನು.

      ಅಥವಾ

   c. ಸ್ವತಹ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.
   d. ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು :
      1. ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.
      2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ
      3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು

ಇ. ಕನ್ನಡ ಮಾಧ್ಯಮ ಅಭ್ಯರ್ಥಿ

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ : 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಜಾರಿ ದಿನಾಂಕ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೆ ಹಾಜರುಪಡಿಸತಕ್ಕದ್ದು ಹಾಗೂ ಈ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಬೇಕು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯನ್ನು ರದ್ದಪಡಿಸಲಾಗುವುದು.

ಎಫ್. ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ(PDP)

ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ(PDP) ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 23 ಸೆನೆನಿ 99 ದಿನಾಂಕ 23.11.2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಈ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಬೇಕು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೆ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ(PDP) ಮೀಸಲಾತಿಯನ್ನು ರದ್ದುಪಡಿಸಲಾಗುವುದು.

ಜಿ. ತೃತೀಯ ಲಿಂಗದ ಅಭ್ಯರ್ಥಿ

ಕರ್ನಾಟಕ ಸರ್ಕಾರದ, ಅಧಿಸೂಚನೆ ಸಂಖ್ಯೆ:ಸಿ.ಆಸುಇ 179 ಸೇನೆನಿ 2020, ದಿನಾಂಕ:06.07.2021 ರಂತೆ ಕರ್ನಾಟಕ ನಾಗರಿಕ ಸೇವಾ(ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು,2021 ನಿಯಮ 9 ಉಪನಿಯಮ (1)ರ ಖಂಡ (ಸಿ) ರಂತೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದಲೂ 01% ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದೆ. ಈ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸ ಬಯಸುವ ಅಭ್ಯರ್ಥಿಗಳು ತಮ್ಮ 'ಗುರುತಿನ ಪ್ರಮಾಣ ಪತ್ರವನ್ನು" "ತೃತೀಯ ಲಿಂಗಿಗಳ" (ಹಕ್ಕು ಮತ್ತು ಸಂರಕ್ಷಣೆ) ಕಾಯಿದೆ 2019 ಸೆಕ್ಷನ್ 5 ಮತ್ತು 6 ಅಥವಾ 7ರಲ್ಲಿ ನಮೂದಿಸಿರುವ ನಮೂನೆ-3 ಅಥವಾ ನಮೂನೆ- 4ನ್ನು ಜಿಲ್ಲಾಧಿಕಾರಿಗಳಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಈ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಬೇಕು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೆ ಹಾಜರುಪಡಿಸತಕ್ಕದ್ದು.

ಕರ್ನಾಟಕ ಮುನಿಸಿಪಲ್ ಕರ್ಪೊರೇಷನ್ (ರಾಜ್ಯದ ಪಾಲಿಕೆಗಳ ಪೌರಕಾರ್ಮಿಕರ ನೇಮಕಾತಿ) (ವಿಶೇಷ) ನಿಯಮಗಳು 2022 ರಲ್ಲಿನ ಮೀಸಲಾತಿಗೆ ಸಂಬಂಧಿಸಿದಂತೆ ಸರ್ಕಾರವು ಹೊರಡಿಸುವ ಆದೇಶಕ್ಕೆ ಈ ಅಧಿಸೂಚನೆಯು ಒಳಪಟ್ಟಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಆಯುಕ್ತರು, ಮಹಾನಗರಪಾಲಿಕೆ, ಶಿವಮೊಗ್ಗ ರವರ ಕಛೇರಿಯ ದಿನಾಂಕಃ22.01.2024ರ ಅಧಿಸೂಚನೆಯನ್ನು ಆಯುಕ್ತರು, ಮಹಾನಗರಪಾಲಿಕೆ, ಶಿವಮೊಗ್ಗ ಹಾಗೂ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದ್ದು ನೋಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯುಕ್ತರು, ಮಹಾನಗರಪಾಲಿಕೆ, ಶಿವಮೊಗ್ಗ ಕಛೇರಿಯ ಅಧಿಕೃತ ವೆಬ್ ಸೈಟ್ www.shivamoggacity.mrc.gov.in ನಲ್ಲಿ ಪರಿಶೀಲಿಸಬಹುದಾಗಿದೆ.
ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: **08182-268506**.

ಆಯುಕ್ತರು
ಶಿವಮೊಗ್ಗ ಮಹಾನಗರ ಪಾಲಿಕೆ
ಶಿವಮೊಗ್ಗ